# ಪ್ರಕಟಣೆ

ಸಾರ್ವಜನಿಕ ಶಿಕ್ಷಣ ಇಲಾಖೆಯ ಕೇಂದ್ರೀಕೃತ ದಾಖಲಾತಿ ಘಟಕದಿಂದ 2021ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (KARTET-2021) ದಿನಾಂಕ:-22/08/2021 ರಂದು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಡೆಸಲಾಯಿತು. ಅರ್ಹತಾ ಪರೀಕ್ಷೆ ಪತ್ರಿಕೆ-1 (1 ರಿಂದ 5 ನೇ ತರಗತಿ ಬೋಧಿಸುವ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ) ಮತ್ತು ಪತ್ರಿಕೆ -2 (6 ರಿಂದ 8ನೇ ತರಗತಿ ಬೋಧಿಸುವ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ) ನಡೆಸಲಾಯಿತು. ಸದರಿ ಪರೀಕ್ಷೆಯ ಪತ್ರಿಕೆ-1ಕ್ಕೆ 93,176 ಪತ್ರಿಕೆ-2ಕ್ಕೆ 1,38,710 ಸೇರಿದಂತೆ ಒಟ್ಟು 2,31,886 ಅಭ್ಯರ್ಥಿಗಳು ಹಾಜರಾಗಿರುತ್ತಾರೆ. ಶಿಕ್ಷಕರ ಅರ್ಹತಾ ಪರೀಕ್ಷೆಯು ಭಾಷೆ-1 ಮತ್ತು ಭಾಷೆ-2 ರಲ್ಲಿ ಎಂಟು ಭಾಷೆಗಳನ್ನು (ಕನ್ನಡ, ಇಂಗ್ಲೀಷ್, ಉರ್ದು, ತಮಿಳು, ತೆಲುಗು, ಮರಾಠಿ, ಹಿಂದಿ ಮತ್ತು ಸಂಸ್ಕೃತ) ಹಾಗೂ ಐಚ್ಛಿಕ ವಿಷಯದ ಪತ್ರಿಕೆಗಳು ಏಳು ಭಾಷಾ ಮಾಧ್ಯಮಗಳನ್ನು (ಕನ್ನಡ, ಇಂಗ್ಲೀಷ್, ಉರ್ದು, ತಮಿಳು, ತೆಲುಗು, ಮರಾಠಿ, ಮತ್ತು ಹಿಂದಿ) ಒಳಗೊಂಡಿತ್ತು.

2021ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಕೀ-ಉತ್ತರಗಳನ್ನು **ದಿನಾಂಕ:24/08/2021** ಪ್ರಕಟಗೊಳಿಸಿ, ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ:31/08/2021 ರವರೆಗೆ ಕಾಲಾವಕಾಶ ನೀಡಲಾಗಿತ್ತು. ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ ಒಟ್ಟು **4201 (ಪತ್ರಿಕೆ-1-392 ಮತ್ತು ಪತ್ರಿಕೆ-2-3089 = ಒಟ್ಟು 4201)** ಆಕ್ಷೇಪಣೆಗಳನ್ನು ಸ್ವೀಕರಿಸಿ, ಪರಿಶೀಲಿಸಲಾಗಿದೆ. ಪ್ರತಿ ವಿಷಯದ ತಜ್ಞರನ್ನೊಳಗೊಂಡ ಸಮಿತಿಯಿಂದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಸಮಿತಿಯು ನೀಡಿದ ವರದಿಯನ್ನಾಧರಿಸಿ ಅಂತಿಮ ಕೀ-ಉತ್ತರಗಳನ್ನು **ದಿನಾಂಕ: 08/09/2021** ರಂದು ಪ್ರಕಟಿಸಿದೆ.

ಅಂತಿಮ ಕೀ-ಉತ್ತರಗಳನ್ನು ಆಧರಿಸಿ, ಓ.ಎಂ.ಆರ್ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿ ಫಲಿತಾಂಶಗಳನ್ನು ಲೆಕ್ಕಾಚಾರ ಮಾಡಿದೆ. ಅದರಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಪತ್ರಿಕೆಗಳಲ್ಲಿ ಶೇ.60 ರಷ್ಟು ಅರ್ಹತಾ ಅಂಕಗಳು ಹಾಗೂ ಪ.ಜಾತಿ, ಪ.ಪಂಗಡ, ಪ್ರವರ್ಗ-1 ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ ಶೇ.55 ರಷ್ಟು ಅರ್ಹತಾ ಅಂಕಗಳನ್ನು ಫಲಿತಾಂಶಕ್ಕೆ ಪರಿಗಣಿಸಿದೆ.

ಅಭ್ಯರ್ಥಿಗಳಿಗೆ ಪೂರ್ವ ಮುದ್ರಿತ ಓ.ಎಂ.ಆರ್ ಪತ್ರಿಕೆಯಲ್ಲಿ ನೀಡಿದ ಸೂಕ್ತ ಅಂಕಣದಲ್ಲಿ ಅಭ್ಯರ್ಥಿಯು ತನ್ನ ಸಹಿ ಹಾಗೂ ಎಡಗೈ ಹೆಬ್ಬೆಟ್ಟಿನ ಗುರುತನ್ನು ಒತ್ತುವಂತೆ ಸ್ಪಷ್ಟವಾಗಿ ಸೂಚಿಸಿದ್ದರೂ ಸಹ ವಿವಿಧ ಜಿಲ್ಲಾ ಪರೀಕ್ಷಾ ಕೇಂದ್ರಗಳ 21 ಅಭ್ಯರ್ಥಿಗಳು ಓಎಂಆರ್ ಪತ್ರಿಕೆಯಲ್ಲಿ ತಮ್ಮ ಸಹಿಯನ್ನು ಮಾಡಿರುವುದಿಲ್ಲ. ಇದು ನಿಯಮಾನುಸಾರ ಪರಿಶೀಲನೆಯಲ್ಲಿರುವುದರಿಂದ ಸದರಿ ಅಭ್ಯರ್ಥಿಗಳ ಫಲಿತಾಂಶವನ್ನು ತಡೆಯಿಡಿಯಲಾಗಿದೆ.

ಕನಿಷ್ಠ ಅರ್ಹತಾ ಅಂಕಗಳನ್ನು ಗಳಿಸಿದ ಅಭ್ಯರ್ಥಿಗಳಿಗೆ **QR** ಕೋಡ್ ದತ್ತಾಂಶವನ್ನು ಹೊಂದಿರುವ ಗಣಕೀಕೃತ ಅಂಕಪಟ್ಟಿ ವಿತರಿಸಲಾಗುವುದು. ಕೇಂದ್ರೀಕೃತ ದಾಖಲಾತಿ ಘಟಕದಿಂದ ಈ ಸಂಬಂಧ ಮುದ್ರಿತ ಅಂಕಪಟ್ಟಿಯನ್ನು ವಿತರಿಸುವುದಿಲ್ಲ. ಬದಲಾಗಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ಸುರಕ್ಷತಾ ಕೋಡ್ **(QR Code)** ಹೊಂದಿರುವ ಗಣಕೀಕೃತ ಪ್ರಮಾಣ ಪತ್ರ ಪ್ರತಿಯನ್ನು ಪಡೆದುಕೊಳ್ಳಬಹುದಾಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿರುವಂತೆ ನೋಂದಣಿ/ಅರ್ಜಿಸಂಖ್ಯೆ ಮತ್ತು ಅಭ್ಯರ್ಥಿಯ ಜನ್ಮದಿನಾಂಕ (ಆನ್‌ಲೈನ್ ಅರ್ಜಿಯಲ್ಲಿರುವಂತೆ) ನಮೂದಿಸಿ ಗಣಕೀಕೃತ ಪ್ರಮಾಣ ಪತ್ರವನ್ನು ಪಡೆದುಕೊಳ್ಳಬಹುದು.

ಅಭ್ಯರ್ಥಿಗಳು ಮುಂದಿನ ವಾರದಿಂದ ಇಲಾಖಾ ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ತಮ್ಮ **ಅರ್ಹತಾ ಪ್ರಮಾಣ ಪತ್ರ**/ಗಣಕೀಕೃತ ಅಂಕಪಟ್ಟಿ (ELIGIBILITY CERTIFICATE) **ಯನ್ನು ಬೇಕಾದಷ್ಟು ಸಂಖ್ಯೆಯಲ್ಲಿ** ಪಡೆದುಕೊಳ್ಳಬಹುದಾಗಿದ್ದು, 2021ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ (KARTET-2021) ಕನಿಷ್ಠ ಅರ್ಹತಾ ಅಂಕಗಳನ್ನು ಗಳಿಸಿದ ಅಭ್ಯರ್ಥಿಗಳ **ಅರ್ಹತಾ ಪ್ರಮಾಣ ಪತ್ರ**/ಗಣಕೀಕೃತ ಅಂಕಪಟ್ಟಿಯು (ELIGIBILITY CERTIFICATE) ಜೀವಿತಾವಧಿಯವರೆಗೆ (LIFETIME) ಮಾನ್ಯತೆ ಹೊಂದಿದೆ. ಸದರಿ ಪ್ರಮಾಣ ಪತ್ರವು ಸೀಮಿತ ದಿನಗಳಿಗೆ ಮಾತ್ರ ವೆಬ್‌ಸೈಟ್‌ನಲ್ಲಿ ಲಭ್ಯವಿರಲಿದ್ದು, ಅಭ್ಯರ್ಥಿಗಳು ಸಾಕಷ್ಟು ಸಂಖ್ಯೆಯ ಪ್ರತಿಗಳನ್ನು ಡೌನ್‌ಲೋಡ್ ಮಾಡಿಕೊಂಡು ತಮ್ಮಲ್ಲಿ ಸಂರಕ್ಷಿಸಿಕೊಳ್ಳುವುದು. ಈ ಸಂಬಂಧ ಕೇಂದ್ರೀಕೃತ ದಾಖಲಾತಿ ಘಟಕವನ್ನು ಪದೇ ಪದೇ ಸಂಪರ್ಕಿಸುವ ಅಗತ್ಯವಿರುವುದಿಲ್ಲ.

ಪ್ರಮಾಣ ಪತ್ರದಲ್ಲಿ ಮುದ್ರಿತವಾಗಿರುವ **QR Code** ಅನ್ನು ಸ್ಕ್ಯಾನ್ ಮಾಡುವುದರ ಮೂಲಕ ಪ್ರಮಾಣ ಪತ್ರದ ನೈಜತೆಯನ್ನು ದೃಢೀಕರಿಸಿಕೊಳ್ಳಬಹುದಾಗಿದೆ. 2021ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಗೆ ದಿನಾಂಕ:01/07/2021 ರಂದು ಅರ್ಜಿಯನ್ನು ಆಹ್ವಾನಿಸಿ, ದಿನಾಂಕ:22/08/2021 ರಂದು ಪರೀಕ್ಷೆಯನ್ನು ಕೋವಿಡ್-19 ಹಿನ್ನೆಲೆ ಪ್ರಮಾಣಿತ ಕಾರ್ಯಾಚರಣಾ ವಿಧಾನ (STANDARD OPERATING PROCEDURE – SOP) ಪಾಲಿಸಿ ಅತ್ಯಂತ ಸುಗಮ ಹಾಗೂ ಯಶಸ್ವಿಯಾಗಿ ನಡೆಸಲಾಗಿತ್ತು. ಪರೀಕ್ಷಾ ಫಲಿತಾಂಶವನ್ನು ದಿನಾಂಕ:13/09/2021 ರಂದು ಪ್ರಕಟಿಸಲಾಗಿದ್ದು, ಪರೀಕ್ಷೆಯ ಸಂಪೂರ್ಣ ಪ್ರಕ್ರಿಯೆಯನ್ನು ಸುಮಾರು 72 ದಿನಗಳ ಅವಧಿಯಲ್ಲಿ ಪೂರ್ಣಗೊಳಿಸಲಾಗಿದೆ. ಇದರಿಂದ ಪರೀಕ್ಷಾ ಪ್ರಕ್ರಿಯೆಗೆ ತೆಗೆದುಕೊಂಡ ಕಾಲಾವಕಾಶವು ಗಣನೀಯವಾಗಿ ಇಳಿಕೆಯಾಗಿದೆ.

2021ರ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಕಾಲಮಿತಿಯಲ್ಲಿ ನಡೆಸಿ, ಫಲಿತಾಂಶ ನೀಡಲು ಸಂಪೂರ್ಣ ಸಹಕಾರ ನೀಡಿದ ಸನ್ಮಾನ್ಯ ಶಿಕ್ಷಣ ಸಚಿವರು, ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಅಪರ ಮುಖ್ಯ ಕಾರ್ಯದರ್ಶಿಗಳು, (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಕಂದಾಯ ಇಲಾಖೆ), ಪೊಲೀಸ್ ಮಹಾನಿರ್ದೇಶಕರು, ಅಪರ ಮುಖ್ಯ ಕಾರ್ಯದರ್ಶಿಗಳು, (ಡಿ.ಪಿ.ಎ.ಆರ್.ಇ-ಆಡಳಿತ) ಮತ್ತು ಎನ್.ಐ.ಸಿ ಕರ್ನಾಟಕ ರವರಿಗೆ, ಖಜಾನೆ ಇಲಾಖೆಯ ಆಯುಕ್ತರು, ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಪರ ಆಯುಕ್ತರು, ಸಾ.ಶಿ.ಇ ಕಲ್ಬುರ್ಗಿ ಮತ್ತು ಧಾರವಾಡ ಹಾಗೂ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರುಗಳನ್ನೊಳಗೊಂಡಂತೆ ಪರೀಕ್ಷಾ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದ ಎಲ್ಲಾ ಅಧಿಕಾರಿಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯು ಆಭಾರಿಯಗಿರುತ್ತದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ